ಕರ್ನಾಟಕ ವಿಧಾನ ಪರಿಷತ್ತು

1	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	423
2	ಸದಸ್ಯರ ಹೆಸರು	:	ಶ್ರೀ. ಎನ್ ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)
3	ಉತ್ತರಿಸುವ ದಿನಾಂಕ	:	16-12-2021
4	ಉತ್ತರಿಸುವವರು	:	ಮುಖ್ಯಮಂತ್ರಿಗಳು

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿನ ಕೆರೆಗೆ ಭಫರ್ ವಲಯದಲ್ಲಿ ನಿರ್ಮಾಣಗೊಂಡಿರುವ ಕಟ್ಟಡಗಳ ಸಂಖ್ಯೆ ಎಷ್ಟು; ಅದರಲ್ಲಿ 3 ಕ್ಕಿಂತ ಹೆಚ್ಚು ಮಹಡಿ ಹೊಂದಿರುವ ಕಟ್ಟಡಗಳ ಸಂಖ್ಯೆ ಎಷ್ಟು; ಈ ಕಟ್ಟಡಗಳು ಯಾವ ಕೆರೆಗೆ ಭಫರ್ ವ್ಯಾಪ್ತಿಯಲ್ಲಿ ಬರುತ್ತದೆ; (ಕೆರೆಗಳವಾರು ಕಟ್ಟಡದ ಹೆಸರಿನೊಂದಿಗೆ ಮಾಹಿತಿ ನೀಡುವುದು)	ಬಿಬಿಎಂಪಿ ವ್ಯಾಪ್ತಿಯಲ್ಲಿನ ಕೆರೆಗಳ ಗಡಿ (ಎಲ್ಲೆ) ಮತ್ತು ಬಫರ್ ವಲಯದ ಗಡಿ (ಎಲ್ಲೆ) ನಿಗಧಿಪಡಿಸುವ ಕಾರ್ಯವು ಕಂದಾಯ ಇಲಾಖೆ ವ್ಯಾಪ್ತಿಗೆ ಒಳಪಟ್ಟಿದ್ದು, ಈ ಪ್ರಕ್ರಿಯೆಯು ತಹಲ್‌ವರೆಗೆ ಕಾರ್ಯಗತವಾಗಿರುವುದಿಲ್ಲ. ಆದುದರಿಂದ ಸದರಿ ಕೆರೆಗಳ ಗಡಿ ಮತ್ತು ಬಫರ್ ವಲಯದ ಗಡಿ ನಡುವೆಯಿರುವ ಕಟ್ಟಡಗಳನ್ನು ಗುರುತಿಸಿ ಕ್ರಮಕೈಗೊಳ್ಳಲು ಸಾಧ್ಯವಾಗಿರುವುದಿಲ್ಲ.
ಆ	ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಗುರುತಿಸಲಾಗಿರುವ ಅಕ್ರಮ ಕಟ್ಟಡಗಳ ಸಂಖ್ಯೆ ಎಷ್ಟು; ಈ ಅಕ್ರಮ ಕಟ್ಟಡಗಳನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು:	ಬಿಬಿಎಂಪಿ ವ್ಯಾಪ್ತಿಯಲ್ಲಿ ಅಕ್ರಮ / ಅನಧಿಕೃತ ಕಟ್ಟಡಗಳ ಸರ್ವೆ ಕಾರ್ಯವನ್ನು ಕೈಗೊಳ್ಳಲಾಗಿದ್ದು, ಈ ವರೆವಿಗೂ **65,091** ಅಕ್ರಮ ಕಟ್ಟಡಗಳನ್ನು ಗುರುತಿಸಲಾಗಿರುತ್ತದೆ. ಈ ವರೆವಿಗೂ **15,317** ಕಟ್ಟಡಗಳಿಗೆ ಬಿಬಿಎಂಪಿ ಕಾಯ್ದೆಯನ್ವಯ ನೋಟೀಸ್‌ಗಳನ್ನು ಜಾರಿಗೊಳಿಸಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿರುತ್ತದೆ.
ಇ	ಕಳೆದ 2 ವರ್ಷಗಳಲ್ಲಿ ನಿರ್ಮಾಣಗೊಂಡ ಅಕ್ರಮ ಕಟ್ಟಡಗಳು ಅಪಾಯಕಾರಿ ಸ್ಥಿತಿಯಲ್ಲಿರುವ ಎಂಬ ಕಾರಣಕ್ಕಾಗಿ ತೆರವುಗೊಳಿಸಿದ ಕಟ್ಟಡಗಳ ಸಂಖ್ಯೆ ಎಷ್ಟು;	
ಈ	ಕೆರೆಗಳ ಭಫರ್ ವಲಯದಲ್ಲಿ ನಿರ್ಮಾಣಗೊಂಡಿರುವ ಕಟ್ಟಡಗಳ ಮಾರಾಟ ಮತ್ತು ಖರೀದಿಯನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ?	

ಸಂಖ್ಯೆ: ನಅಇ 386 ಎಂಎನ್‌ಯು 2021

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ